**Akashvani : Bangalore**
**Regional Bulletin In Kannada**
**12.03.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಭಾರತೀಯ ರೈಲ್ವೆ ಕಾಯಕಲ್ಪ; ತಮ್ಮ ಸರ್ಕಾರದ ಸಂಕಲ್ಪ - ಪ್ರಧಾನಮಂತ್ರಿ ನರೇಂದ್ರ ಮೋದಿ

೨. ಬರುವ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಲ್ಲೂ ಪದವಿ ತರಗತಿ ಪ್ರವೇಶ ಪ್ರಕ್ರಿಯೆ ಏಕಕಾಲಕ್ಕೆ ಆರಂಭ

೩. ರಾಜ್ಯಸರ್ಕಾರೀ ನೌಕರರ ತುಟ್ಟಿಭತ್ಯೆ, ಶೇಕಡ ೩.೭೫ರಷ್ಟು ಹೆಚ್ಚಳ ; ಜನವರಿ ೧ ರಿಂದ ಪೂರ್ವಾನ್ವಯ

೪. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಮಾನಸಿಕ ಒತ್ತಡ ನಿರ್ವಹಣೆ ನೆರವಿಗೆ ಸಹಾಯವಾಣಿ ಸೌಲಭ್ಯ ನಾಡಿದ್ದು ಆರಂಭ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ, ದೇಶಾದ್ಯಂತ ೧೦ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಗುಜರಾತ್‌ನ ಅಹಮದಾಬಾದ್‌ನಿಂದ ಇಂದು ಬೆಳಿಗ್ಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದರು. ಹಾಗೂ ೮೫ ಸಾವಿರ ಕೋಟಿ ರೂಪಾಯಿ ವೆಚ್ಚದ ರೈಲ್ವೆ ಯೋಜನೆಗಳನ್ನು ದೇಶಕ್ಕೆ ಸಮರ್ಪಿಸಿದರು. ಈ ಪೈಕಿ ರೈಲ್ವೆ ಮಾರ್ಗಗಳ ದ್ವಿಗುಣಗೊಳಿಸುವಿಕೆ, ಹೊಸ ರೈಲು ಮಾರ್ಗ, ಗತಿಶಕ್ತಿ ಮಲ್ಟಿ ಕಾರ್ಗೋ ಟರ್ಮಿನಲ್, ಗೂಡ್ಸ್‌ಶೆಡ್, ಒಂದು ನಿಲ್ದಾಣ ಒಂದು ಉತ್ಪನ್ನ ಮಳಿಗೆಗಳು ಮತ್ತು ಜನೌಷಧಿ ಕೇಂದ್ರಗಳು ಸೇರಿವೆ. ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಮಂತ್ರಿಯವರು ತಮ್ಮ ಸರ್ಕಾರ ರೈಲ್ವೆ ಇಲಾಖೆ ಕಾಯಕಲ್ಪಕ್ಕಾಗಿ ಶ್ರಮಿಸುತ್ತಿದೆ. ದೇಶದಲ್ಲಿ ಅತ್ಯಾಧುನಿಕ ವಂದೇ ಭಾರತ್ ರೈಲುಗಳ ಸಂಖ್ಯೆ ಈಗ ೨೫೦ರ ಗಡಿ ದಾಟಿದೆ. ವಂದೇ ಭಾರತ್ ಮಾರ್ಗಗಳನ್ನು ಇನ್ನೂ ಹೆಚ್ಚಿಸಲಾಗುತ್ತಿದೆ ಎಂದರು. ಇದರಿಂದ ಜನರ ಪ್ರಯಾಣದ ಅವಧಿಯು ಕಡಿಮೆಯಾಗುತ್ತದೆ. ಕಳೆದ ೭೫ ದಿನಗಳಲ್ಲಿ ೧೧ ಲಕ್ಷ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ೨೦೧೪ಕ್ಕೂ ಮೊದಲು ಭಾರತೀಯ ರೈಲ್ವೆ ಯಾವ ಸ್ಥಿತಿಯಲ್ಲಿತ್ತು, ಈಗ ಹೇಗಿದೆ ಎನ್ನುವುದನ್ನು ಗಮನಿಸಬೇಕು. ರೈಲ್ವೆ

ಬಜೆಟ್‌ನ್ನು ಸಾಮಾನ್ಯ ಮುಂಗಡ ಪತ್ರದೊಂದಿಗೆ ಸೇರಿಸಿ ಗಮನಾರ್ಹ ಮೊತ್ತವನ್ನು ಮೀಸಲು ಇಡುತ್ತಿರುವುದು ತಮ್ಮ ಸರ್ಕಾರದ ಉಲ್ಲೇಖಾರ್ಹ ಹೆಜ್ಜೆಯಾಗಿದೆ ಎಂದರು. ರೈಲ್ವೆ ಇಲಾಖೆಯ ಅಭಿವೃದ್ಧಿಗೆ ತಮ್ಮ ಸರ್ಕಾರ ವಹಿಸಿರುವ ಕಾಳಜಿಯಿಂದಾಗಿ ಹೂಡಿಕೆಯ ಪ್ರಮಾಣ ಗಣನೀಯವಾಗಿ ಹೆಚ್ಚಾಗಿದೆ. ಇದು ರೈಲ್ವೆ ವಲಯದಲ್ಲಿ ವಿಫುಲ ಉದ್ಯೋಗಾವಕಾಶಗಳನ್ನು ಸೃಷ್ಟಿಸಿದೆ. ಸರ್ಕಾರದ ಈ ಎಲ್ಲ ಪ್ರಯತ್ನಗಳನ್ನು ಕೆಲವರು ಚುನಾವಣಾ ತಂತ್ರ ಎಂದು ಅರ್ಥೈಸುತ್ತಾರೆ. ಆದರೆ ತಮ್ಮ ಸರ್ಕಾರ ಮತ್ತೊಮ್ಮೆ ಅಧಿಕಾರಕ್ಕೆ ಬರಬೇಕು ಎನ್ನುವ ದುರಾಸೆಯಿಂದ ಈ ಪ್ರಯತ್ನಗಳನ್ನು ಮಾಡುತ್ತಿಲ್ಲ. ಇದು ದೇಶವನ್ನು ಉನ್ನತಮಟ್ಟಕ್ಕೆ ಕೊಂಡೊಯ್ಯುವ ಸಂಕಲ್ಪವಾಗಿದೆ ಎಂದು ನರೇಂದ್ರ ಮೋದಿ ಹೇಳಿದರು.

ಧ್ವನಿ : ನರೇಂದ್ರ ಮೋದಿ

ಪ್ರಧಾನಮಂತ್ರಿಯವರು ಭಾಗವಹಿಸಿದ್ದ ವರ್ಚುವಲ್ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚೆಂದ್ ಗೆಹ್ಲೋಟ್, ಹುಬ್ಬಳ್ಳಿ ರೈಲ್ವೆ ನಿಲ್ದಾಣದಿಂದ ಪಾಲ್ಗೊಂಡರು. ಪ್ರಸ್ತುತ ರಾಜ್ಯದಲ್ಲಿ ೫ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಓಡುತ್ತಿವೆ. ರಾಜ್ಯಕ್ಕೆ ಇಂದು ಮತ್ತೊಂದು ವಂದೇ ಭಾರತ್ ರೈಲು ಉಡುಗೊರೆಯಾಗಿ ದೊರೆತಿದೆ. ರಾಜ್ಯದ ಮೊದಲ ಅಮೃತ್ ಭಾರತ್ ಎಕ್ಸ್‌ಪ್ರೆಸ್ ನ್ನು ಮಾಲ್ಡಾಟೌನ್-ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ನಡುವೆ ಆರಂಭಿಸಲಾಗಿದೆ. ಸರ್.ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಸ್ಟೇಷನ್ ದೇಶದಲ್ಲೇ ಮೊದಲ ಹವಾನಿಯಂತ್ರಿತ ರೈಲ್ವೆ ನಿಲ್ದಾಣವಾಗಿದ್ದು, ವಿಮಾನ ನಿಲ್ದಾಣದಂತಹ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗಿದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ೩೧ ರೈಲ್ವೆ ನಿಲ್ದಾಣಗಳ ಪುನರಾಭಿವೃದ್ಧಿಗೆ ಸಿದ್ಧತೆ ನಡೆಯುತ್ತಿದೆ. ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ೩೩೦ ಕೋಟಿ ೬೨ ಲಕ್ಷ ರೂಪಾಯಿ ವೆಚ್ಚದಲ್ಲಿ ೨೪ ಮೇಲ್ಸೇತುವೆ ಮತ್ತು ಕೆಳಸೇತುವೆ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ರಾಜ್ಯಪಾಲರು ಮಾಹಿತಿ ನೀಡಿದರು. ಪ್ರಧಾನಿಮಂತ್ರಿ ನರೇಂದ್ರ ಮೋದಿ ಅವರು ಇಂದು, ಬಳ್ಳಾರಿ ರೈಲ್ವೇ ನಿಲ್ದಾಣದಲ್ಲಿನ "ಒಂದು ನಿಲ್ದಾಣ, ಒಂದು ಉತ್ಪನ್ನ" ಮಳಿಗೆಗೂ ವಿಡೀಯೋ ಸಂವಾದ ಮೂಲಕ ಚಾಲನೆ ನೀಡಿದರು. ಸ್ಥಳೀಯ ಮಾರುಕಟ್ಟೆಯ ಉತ್ಪನ್ನಗಳಿಗೆ ಉತ್ತೇಜನ ನೀಡಲು ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿನ ಈ ಮಳಿಗೆಯನ್ನು ತೆರೆಯಲಾಗಿದೆ. ಈ ಮಳಿಗೆಯಲ್ಲಿ ಸಂಡೂರು ಕರ ಕುಶಲ ಕೇಂದ್ರದ ಲಂಬಾಣಿ ಕಸೂತಿ ಕಲೆಯ ಉತ್ಪನ್ನಗಳ ಮಾರಾಟ ಆರಂಭವಾಗಿದೆ.

ಬಾಗಲಕೋಟೆ-ಗದಗ ಜೋಡಿ ಮಾರ್ಗ ಹಾಗೂ ಬಾಗಲಕೋಟೆ ರೈಲು ನಿಲ್ದಾಣದಲ್ಲಿ ಒಂದು ನಿಲ್ದಾಣ ಒಂದು ಉತ್ಪನ್ನ ಮಳಿಗೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಲೋಕಾರ್ಪಣೆಗೊಳಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಪಿ.ಸಿ.ಗದ್ದಿಗೌಡರ್ ವ್ಯಾಪಾರ ವಹಿವಾಟು ಹಾಗೂ ಜನರ ಪ್ರಯಾಣಕ್ಕಾಗಿ ಸುಸಜ್ಜಿತ ಹಾಗೂ ಸಮರ್ಪಕ ರೈಲು

ಸಾರಿಗೆಯಿಂದ ದೇಶ ಪ್ರಗತಿ ಹೊಂದಲು ಸಾಧ. ಪ್ರಧಾನಮಂತ್ರಿಗಳ ಅನುಭವ, ಕಲ್ಪನೆ, ನಿರ್ಣಯ ಹಾಗೂ ನಿರಂತರ ಪ್ರಯತ್ನದಿಂದಾಗಿ ದೇಶ ವಿಶ್ವಕ್ಕೆ ಮಾದರಿಯಾಗಿದೆ ಎಂದರು. ೯೫೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಗದಗ-ಬಾಗಲಕೋಟೆ ಜೋಡಿ ಮಾರ್ಗಕ್ಕೆ ಚಾಲನೆ ದೊರೆತಿದ್ದು, ಅದರಲ್ಲಿ ಎರಡು ದೊಡ್ಡ ಸೇತುವೆಗಳು, ೪೨ ಚಿಕ್ಕ ಸೇತುವೆಗಳು ಸೇರಿವೆ ಎಂದರು. ಬಾಗಲಕೋಟೆ ರೈಲ್ವೆ ನಿಲ್ದಾಣದಲ್ಲಿ, ಒಂದು ನಿಲ್ದಾಣ ಒಂದು ಉತ್ಪನ್ನ ಯೋಜನೆಯಡಿಯಲ್ಲಿ, ಜಿಲ್ಲೆಯ ಪ್ರಸಿದ್ಧ ಇಳಕಲ್ ಸೀರೆಗಳ ಮಾರಾಟ ಮಳಿಗೆ ಪ್ರಾರಂಭಿಸಲಾಗಿದೆ. ಇಂತಹ ಮಳಿಗೆಯಿಂದ ಸ್ಥಳೀಯ ಕುಶಲ ಕರ್ಮಿಗಳಿಗೆ ಉತ್ತೇಜನ ದೊರೆಯುತ್ತದೆ ಎಂದು ಹೇಳಿದರು.

<><*<><>*><>

ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಬರುವ ಶೈಕ್ಷಣಿಕ ವರ್ಷದಿಂದ ಪದವಿ ತರಗತಿ ಪ್ರವೇಶ ಪ್ರಕ್ರಿಯೆಯನ್ನು ಏಕಕಾಲಕ್ಕೆ ಆರಂಭಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಹೇಳಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯದ ೧೧ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗ ನೀಡಿಕೆ ಕುರಿತು ಸರ್ಕಾರ ಮತ್ತು ವಿಶ್ವವಿದ್ಯಾಲಯಗಳು ಚಿಂತನೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕಳೆದ ೯ ತಿಂಗಳಲ್ಲಿ ೧೦ ಒಡಂಬಡಿಕೆ ಮೂಲಕ ಶಿಕ್ಷಣ ಮತ್ತು ಔದ್ಯೋಗಿಕ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆ ತರುವ ಪ್ರಯತ್ನ ಮಾಡುತ್ತಿದೆ ಎಂದು ಹೇಳಿದರು.

ಧ್ವನಿ : ಎಂ.ಸಿ. ಸುಧಾಕರ್

ಯಾವ ಕ್ಷೇತ್ರದಲ್ಲಿ ಉದ್ಯೋಗಗಳು ಲಭ್ಯ ಇವೆ ಎನ್ನುವುದನ್ನು ಅಧ್ಯಯನ ಮಾಡಿ ಅದಕ್ಕೆ ಅನುಗುಣವಾಗಿ ಕೌಶಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಬದಲಾವಣೆ ತರುವ ಉದ್ದೇಶವಿದೆ ಎಂದು ಸಚಿವ ಸುಧಾಕರ್ ಹೇಳಿದರು.

<><*<><>*><>

ರಾಜ್ಯಸರ್ಕಾರೀ ನೌಕರರ ತುಟ್ಟಿಭತ್ಯೆಯನ್ನು ಶೇಕಡ ೩.೭೫ ರಷ್ಟು ಹೆಚ್ಚಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದ ಪೋಸ್ಟ್ ಮೂಲಕ ಮಾಹಿತಿ ನೀಡಿದ್ದಾರೆ. ರಾಜ್ಯಸರ್ಕಾರಿ ನೌಕರರ ತುಟ್ಟಿಭತ್ಯೆ ಶೇಕಡ ೩೮.೭೫ ರಿಂದ ಶೇಕಡ ೪೨.೫ಕ್ಕೆ ಹೆಚ್ಚಳವಾಗಿದೆ. ಈ ವರ್ಷದ ಜನವರಿ ೧ ರಿಂದ ಪೂರ್ವಾನ್ವಯವಾಗುವಂತೆ ಪರಿಷ್ಕೃತ ತುಟ್ಟಿಭತ್ಯೆ ಜಾರಿಯಾಗಲಿದೆ. ಇದರಿಂದ ರಾಜ್ಯ ಬೊಕ್ಕಸಕ್ಕೆ ೧ ಸಾವಿರದ ೭೯೨ ಕೋಟಿ ೭೧ ಲಕ್ಷ ರೂಪಾಯಿಯಷ್ಟು ಹೆಚ್ಚುವರಿ

ವೆಚ್ಚವಾಗಲಿದೆ. ಇತ್ತೀಚೆಗಷ್ಟೇ ಕೇಂದ್ರ ಸರ್ಕಾರ ಕೂಡ ತನ್ನ ನೌಕರರು ಮತ್ತು ಪಿಂಚಣಿದಾರರಿಗೆ ಶೇಕಡ ೪ರಷ್ಟು ತುಟ್ಟಿಭತ್ಯೆ ಹೆಚ್ಚಳವನ್ನು ಪ್ರಕಟಿಸಿತ್ತು.

<><*<><>*><>

ಲೋಕಸಭಾ ಚುನಾವಣೆಗೆ ಬಿಜೆಪಿ ರಾಜ್ಯ ಅಭ್ಯರ್ಥಿಗಳ ಘೋಷಣೆಯಾದ ನಂತರ ಪ್ರಧಾನಮಂತ್ರಿ ನರೇಂದ್ರ ಮೋದಿ ರಾಜ್ಯದ ೫ ಕಡೆ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಮಂತ್ರಿಗಳ ಕರ್ನಾಟಕ ಪ್ರವಾಸದ ಬಗ್ಗೆ ಮಾಹಿತಿ ಬಂದಿದೆ. ಇನ್ನು ೨ ದಿನಗಳಲ್ಲಿ ಪ್ರಧಾನಿಯವರು ರಾಜ್ಯದ ಯಾವ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ ಎನ್ನುವುದು ನಿರ್ಧಾರವಾಗಲಿದೆ ಎಂದರು.

<><*<><>*><>

ಈ ವರ್ಷದ ಎಸ್.ಎಸ್.ಎಲ್.ಸಿ. ಪರೀಕ್ಷೆ ಈ ತಿಂಗಳ ೨೫ರಿಂದ ಏಪ್ರಿಲ್ ೬ರವರೆಗೆ ನಡೆಯಲಿದ್ದು, ವಿದ್ಯಾರ್ಥಿಗಳಿಗೆ ಮಾನಸಿಕ ಒತ್ತಡ ನಿರ್ವಹಣೆ ಮತ್ತು ಆತ್ಮಸ್ಥೈರ್ಯ ತುಂಬುವುದಕ್ಕಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ, ಸಹಾಯವಾಣಿ ಮತ್ತು ಕೌನ್ಸಿಲಿಂಗ್ ಕಾರ್ಯಕ್ರಮವನ್ನು ಆರಂಭಿಸಲಿದೆ. ನಾಡಿದ್ದು, ಗುರುವಾರ ಮಧ್ಯಾಹ್ನ ೨.೩೦ ರಿಂದ ಈ ಸೌಲಭ್ಯ ಆರಂಭವಾಗಲಿದೆ. ಈ ತಿಂಗಳ ೨೨ ರವರೆಗೆ ಪ್ರತಿ ದಿನ ಮಧ್ಯಾಹ್ನ ೨.೩೦ ರಿಂದ ಸಂಜೆ ೬.೩೦ ರವರೆಗೆ, ಇದೇ ಭಾನುವಾರದಂದು ಮಾತ್ರ ಬೆಳಿಗ್ಗೆ ೧೧ರಿಂದ ಸಂಜೆ ೬ ಗಂಟೆವರೆಗೆ ಕಾರ್ಯನಿರ್ವಹಿಸುತ್ತದೆ. ಪರೀಕ್ಷಾ ದಿನಗಳಂದು ಸಹಾಯವಾಣಿ ಬೆಳಿಗ್ಗೆ ೧೦ ರಿಂದ ಮಧ್ಯಾಹ್ನ ೨ ಗಂಟೆಯವರೆಗೆ ಮಾತ್ರ ಕಾರ್ಯನಿರ್ವಹಿಸುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ಅಗತ್ಯ ಇರುವವರು ೦೮೦-೨೩೩೧೦೦೭೫ ಅಥವಾ ೦೮೦-೨೩೩೧೦೦೭೬ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು.

<><*<><>*><>

ಪರಿಸರವನ್ನು ಸ್ವಚ್ಛಗೊಳಿಸಿ ನೈರ್ಮಲ್ಯ ಕಾಪಾಡುವ ಪೌರ ಕಾರ್ಮಿಕರು ವೈದ್ಯರಿದ್ದಂತೆ-ಅವರು ಸಾರ್ವಜನಿಕರಿಗೆ ರೋಗಗಳು ಹರಡದಂತೆ ಎಚ್ಚರ ವಹಿಸುತ್ತಾರೆ ಎಂದು ಉತ್ತರಕನ್ನಡ ಜಿಲ್ಲಾಉಸ್ತುವಾರಿ ಸಚಿವ ಮಂಕಾಳ ವೈದ್ಯ ಹೇಳಿದ್ದಾರೆ. ಕಾರವಾರದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೌರ ಕಾರ್ಮಿಕರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಅವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದರು. ಜಿಲ್ಲೆಯಲ್ಲಿ ದಿನಗೂಲಿ ಆಧಾರದ

ಮೇಲಿದ್ದ ೧೨೭ ಪೌರ ಕಾರ್ಮಿಕರನ್ನು ಇಂದು ಕಾಯಂ ನೌಕರನ್ನಾಗಿ ನೇಮಕ ಮಾಡಲಾಗಿದ್ದು, ಉಳಿದ ೪೪ ಕಾರ್ಮಿಕರನ್ನು ಸಧ್ಯದಲ್ಲೇ ಕಾಯಂಗೊಳಿಸಲಾಗುವುದು ಎಂದು ಸಚಿವರು ತಿಳಿಸಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ದೂರು ನಿರ್ವಹಣೆಗೆ ಸಹಾಯವಾಣಿ ಆರಂಭಿಸಲಾಗಿದೆ. ಸಾರ್ವಜನಿಕರು ಅಗತ್ಯ ಇದ್ದಾಗ ದೂರವಾಣಿ ಸಂಖ್ಯೆ ೦೮೨೬೨-೨೯೫೭೯೫ ಕ್ಕೆ ಕರೆ ಮಾಡಬಹುದು ಎಂದು ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಜಾಗತಿಕ ಆರ್ಥಿಕತೆಯಲ್ಲಿ ಭಾರತ ೩ನೇ ಸ್ಥಾನದತ್ತ ದಾಪುಗಾಲು ಇಡುತ್ತಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯದ ೧೧ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಪ್ರಸ್ತುತ ದೇಶದ ಆರ್ಥಿಕತೆ ಜಾಗತಿಕ ಮಟ್ಟದಲ್ಲಿ ೫ನೇ ಸ್ಥಾನದಲ್ಲಿದೆ ಎಂದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯಾದ್ಯಂತ ಒಣಹವೆ ಮುಂದುವರೆದಿದೆ. ರಾಜ್ಯದ ಗರಿಷ್ಠ ತಾಪಮಾನ ೩೮.೪ ಡಿಗ್ರಿ ಸೆಲ್ಸಿಯೆಸ್ ಕಲಬುರಗಿಯಲ್ಲಿ, ಅತಿ ಕಡಿಮೆ ತಾಪಮಾನ ೧೯.೮ ಡಿಗ್ರಿ ಸೆಲ್ಸಿಯೆಸ್ ಮಂಡ್ಯದಲ್ಲಿ ದಾಖಲಾಗಿದೆ.

ಬೆಂಗಳೂರು ಮತ್ತು ಸುತ್ತಮುತ್ತ ಶುಭ್ರ ಆಕಾಶವಿದ್ದು, ಗರಿಷ್ಠ ೩೪, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.